ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಸರ್ಕಾರದ ಆದೇಶ ಸಂಖ್ಯೆ: ನಅಇ 307 ಸಿಎಸ್‌ಎಸ್ 2020, ದಿನಾಂಕ: 27–07–2021 ರ 15ನೇ ಹಣಕಾಸು ಆಯೋಗದ ಅನುದಾನದಡಿಯಲ್ಲಿ ಕೈಗೊಳ್ಳಲು ಉದ್ದೇಶಿಸಿರುವ "Augmentation of Water Supply through borewell network of pipelines and ground water recharge facilities in Ward No: 05 and 06 (Package No:03) (Package Consists of 6 Works)" ಕಾಮಗಾರಿಯ ಅಂದಾಜು ಮೊತ್ತ ರೂ.4.20 ಕೋಟಿಗಳಿಗೆ ಆಡಳಿತಾತ್ಮಕ ಅನುಮೋದನೆ ಮತ್ತು ಟೆಂಡರ್‌ಗೆ ಅನುಮೋದನೆ ನೀಡುವ ಬಗ್ಗೆ.

ಓದಲಾಗಿದೆ:
1. ಸರ್ಕಾರದ ಆದೇಶ ಸಂಖ್ಯೆ: ನಅಇ 307 ಸಿಎಸ್‌ಎಸ್ 2020, ದಿನಾಂಕ: 27–07–2021.
2. ಮುಖ್ಯ ಆಯುಕ್ತರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ರವರ ಪತ್ರ ಸಂಖ್ಯೆ: ಮುಖ್ಯ ಆಯುಕ್ತರು/ಪಿ.ಆರ್(ಜಿ)/ಸಿಇ(ವೈ)/860/2021–22, ದಿನಾಂಕ:29–03–2022 / 08–04–2022.
3. ಸಮಸಂಖ್ಯೆಯ ಪತ್ರ ದಿನಾಂಕ: 29–04–2022.
4. ಮುಖ್ಯ ಆಯುಕ್ತರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ರವರ ಪತ್ರ ಸಂಖ್ಯೆ: ಮುಖ್ಯ ಆಯುಕ್ತರು/ಸಿಇ(ವೈ)/ಪಿ.ಆರ್(ಜಿ)/860/2022–23, ದಿನಾಂಕ:30–06–2022.
5. ದಿನಾಂಕ: 06–08–2022 ರಂದು ನಡೆದ ಅಧಿಕಾರಯುಕ್ತ ಸಮಿತಿ ಸಭೆಯ ನಡವಳಿ.

* * * * *

ಪ್ರಸ್ತಾವನೆ:

ಮೇಲೆ ಕ್ರಮ ಸಂಖ್ಯೆ (1) ರಲ್ಲಿ ಓದಲಾದ ದಿನಾಂಕ: 27–07–2021ರ ಆದೇಶದಲ್ಲಿ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ 15ನೇ ಹಣಕಾಸು ಆಯೋಗದಡಿಯಲ್ಲಿ 2020–21ನೇ ಸಾಲಿಗೆ ನೀರು ಸರಬರಾಜು ಹಾಗೂ ಘನತ್ಯಾಜ್ಯ ನಿರ್ವಹಣೆ ಸುಧಾರಣೆಗಾಗಿ ನಿಗಧಿಯಾಗಿರುವ ಒಟ್ಟು ರೂ.27900–00 ಲಕ್ಷಗಳ ಪೈಕಿ, ರೂ.18030–00 ಲಕ್ಷಗಳ ಅನುದಾನದ ಮೊತ್ತಕ್ಕೆ ಅನುಬಂಧ–1, 2 ಮತ್ತು 3 ರಲ್ಲಿ ಪಟ್ಟಿ ಮಾಡಿರುವ ಒಟ್ಟು 147 ಸಂಖ್ಯೆಯ ಕಾಮಗಾರಿಗಳನ್ನೊಳಗೊಂಡ ಸೂಕ್ಷ್ಮ ಮಟ್ಟದ ಕ್ರಿಯಾಯೋಜನೆಗೆ (Micro Plan) ಸರ್ಕಾರದ ಅನುಮೋದನೆ ನೀಡಿ ಆದೇಶಿಸಲಾಗಿರುತ್ತದೆ. ಸದರಿ ಆದೇಶದ ಅನುಬಂಧ–2(ಡಿ) ರ ಕ್ರಮ ಸಂಖ್ಯೆ: 7, 8, 9, 10, 11 ಮತ್ತು 12 ರವರೆಗಿನ ಒಟ್ಟು 6 ಕಾಮಗಾರಿಗಳಿಗೆ ಒಟ್ಟು ರೂ.4.20 ಲಕ್ಷಗಳ ಅನುದಾನ ನಿಗಧಿಪಡಿಸಲಾಗಿರುತ್ತದೆ.

ಮೇಲೆ ಕ್ರಮ ಸಂಖ್ಯೆ (2) ರಲ್ಲಿ ಓದಲಾದ ದಿನಾಂಕ: 28–03–2022ರ ಪತ್ರದಲ್ಲಿ, ಮುಖ್ಯ ಆಯುಕ್ತರು, ಬಿಬಿಎಂಪಿ ರವರು ಸರ್ಕಾರದ ಆದೇಶ ಸಂಖ್ಯೆ: ನಅಇ 307 ಸಿಎಸ್‌ಎಸ್ 2020, ದಿನಾಂಕ: 27–07–2021ರಲ್ಲಿ 2020–21ನೇ ಸಾಲಿನ 15ನೇ ಹಣಕಾಸು ಆಯೋಗ ಅನುದಾನದ ಯೋಜನೆಯಡಿಯಲ್ಲಿ ರೂ.4.20 ಕೋಟಿಗಳ ಅನುದಾನ ನಿಗಧಿಪಡಿಸಲಾಗಿರುತ್ತದೆ. ಅದರಂತೆ, ಸರ್ಕಾರದ ಆದೇಶ ಸಂಖ್ಯೆ: ನಅಇ 307 ಸಿಎಸ್‌ಎಸ್ 2020, ದಿನಾಂಕ: 27–07–2021 ರ ಕ್ರಿಯಾ ಯೋಜನೆಯ ಅನುಬಂಧ–2(ಡಿ) 15 ನೇ ಹಣಕಾಸು ಆಯೋಗ ಅನುದಾನದ ಅಡಿಯಲ್ಲಿ 2020–21 ನೇ ಸಾಲಿನ ನೀರು ಸರಬರಾಜು ಸುಧಾರಣೆ ಕಾಮಗಾರಿ ಯೋಜನೆಯಡಿ ಕ್ರಮ ಸಂಖ್ಯೆ: 07 ರಿಂದ 12 ರಲ್ಲಿ ಈ ಕಾಮಗಾರಿಗಳಿಗೆ "Augmentation of Water Supply through borewell network of pipelines and ground water recharge facilities in Water No: 05 and 06 (Package No: 03)

. . .2/–

(Package Consists of 6 Works)" ಕಾಮಗಾರಿಗಳ ಮೊತ್ತ ರೂ.420.00 ಲಕ್ಷಗಳಿಗೆ ಜಾಬ್ ಸಂಖ್ಯೆಯನ್ನು ಪಡೆಯಲಾಗಿರುತ್ತದೆ.

ಸರ್ಕಾರದ ಆದೇಶ ಸಂಖ್ಯೆ: ನಅಇ 307 ಸಿಎಸ್ಎಸ್ 2020, ದಿನಾಂಕ: 27-07-2021ರ ಕ್ರಿಯಾ ಯೋಜನೆ ಅನುಬಂಧ-02(ಡಿ)ರ ಕ್ರಮ ಸಂಖ್ಯೆ : 07 ರಿಂದ 12 ರವರೆಗೆ ಲಭ್ಯವಿರುವ ಅನುದಾನಕ್ಕೆ ಅನುಗುಣವಾಗಿ ಟೆಂಡರ್ನ್ನು ಯಲಹಂಕ ವಲಯ, ಬ್ಯಾಟರಾಯನಪುರ ವಿಭಾಗ ಕಛೇರಿಯಿಂದ ಟೆಂಡರ್ ಸಂಖ್ಯೆ: EE/BTP/ BBMP/E-PMT/07/2021-22, Date: 03-09-2021 ಹಾಗೂ Corregedum ದಿನಾಂಕ: 22-10-2021 ರಂತೆ ದ್ವಿಲಕೋಟೆ ಪದ್ಧತಿಯಲ್ಲಿ ಇ-ಪ್ರೊಕ್ಯೂರ್ಮೆಂಟ್ ಮೂಲಕ ರೂ.361.04 ಲಕ್ಷಗಳಿಗೆ (ಟೆಂಡರ್ಗಿಟ್ಟ ಮೊತ್ತ) ಟೆಂಡರ್ ಆಹ್ವಾನಿಸಲಾಗಿರುತ್ತದೆ. ಸದರಿ ಕಾಮಗಾರಿಯ ತಾಂತ್ರಿಕ ಬಿಡ್ನ್ನು ದಿನಾಂಕ: 11-11-2021 ರಂದು ತೆರೆಯಲಾಗಿದ್ದು, ಟೆಂಡರ್ ಪ್ರಕ್ರಿಯೆಯಲ್ಲಿ ಮೂರು ಜನ ಗುತ್ತಿಗೆದಾರರು ಭಾಗವಹಿಸಿದ್ದು, ಮೂರು ಜನರೂ ತಾಂತ್ರಿಕವಾಗಿ ಅರ್ಹರಾಗಿರುತ್ತಾರೆಂದು ಮುಖ್ಯ ಆಯುಕ್ತರು, ಬಿಬಿಎಂಪಿ ರವರು ತಿಳಿಸಿರುತ್ತಾರೆ.

ಬಿಡ್ದಾರರಾದ Sri Nagasandra Ramarao Satish (Sathya Borewell Cleaning) ಮತ್ತು Sri Nagasandra Shamanna Ramarao (Rajalakshmi Rock Drillers) ರವರು ತಾಂತ್ರಿಕವಾಗಿ ಅರ್ಹತೆ ಹೊಂದಿರುವುದರಿಂದ ದಿನಾಂಕ: 16-02-2022 ರಂದು ಮಾನ್ಯ ಆಯುಕ್ತರವರ ಅಧ್ಯಕ್ಷತೆಯಲ್ಲಿ ನಡೆದ ತಾಂತ್ರಿಕ ಮೌಲ್ಯಮಾಪನ ಸಮಿತಿ ಸಭೆಯಲ್ಲಿ ತಾಂತ್ರಿಕ ಬಿಡ್ಗೆ ಅನುಮೋದನೆ ನೀಡಿ ಆರ್ಥಿಕ ಬಿಡ್ನ್ನು ತೆರೆಯಲು ಅನುಮೋದನೆ ನೀಡಿರುವಂತೆ ದಿನಾಂಕ: 23-02-2022 ರಂದು ತೆರೆಯಲಾಗಿರುತ್ತದೆ. ವಿವರಗಳು ಈ ಕೆಳಕಂಡಂತಿರುತ್ತವೆ ಎಂದು ಮುಖ್ಯ ಆಯುಕ್ತರು, ಬಿಬಿಎಂಪಿ ರವರು ತಿಳಿಸಿರುತ್ತಾರೆ.

ಕ್ರ. ಸಂ	ತಾಂತ್ರಿಕ ಮೌಲ್ಯ ಮಾಪನದಲ್ಲಿ ಅರ್ಹರಾದ ಗುತ್ತಿಗೆದಾರರು	ಅಂದಾಜು ಮೊತ್ತ (ರೂ.ಲಕ್ಷಗಳಲ್ಲಿ)	ಟೆಂಡರ್ ಗಿಟ್ಟ ಮೊತ್ತ (ರೂಗಳಲ್ಲಿ)	ಟೆಂಡರ್ನಲ್ಲಿ ನಮೂದಿಸಿರುವ ಮೊತ್ತ (ರೂಗಳಲ್ಲಿ)	ಟೆಂಡರ್ ಗಿಟ್ಟ ಮೊತ್ತ ದರಗಳಿಗೆ ಹೋಲಿಸಿದಾಗ
1	Sri.Nagasandra Shamanna Ramarao(Rajalakshmi Rock Drillers)	420.00	361.04	38017365.07	5.29%
2	Sri.Nagasandra Ramarao Satish (Sathya Borewell Cleaning)			38878622.10	7.68%

ಸದರಿ ಕಾಮಗಾರಿಯ ಟೆಂಡರ್ ಪ್ರಕ್ರಿಯೆಯಲ್ಲಿ ಭಾಗವಹಿಸಿರುವ ಎಲ್-1 ಗುತ್ತಿಗೆದಾರರಾದ Sri Nagasandra Shamanna Ramarao (Rajalakshmi Rock Drillers) ರವರೊಂದಿಗೆ ದರ ಸಂಧಾನ ಮಾಡಲಾಗಿದ್ದು, ದರ ಸಂಧಾನದ ನಂತರ ದರಗಳ ವಿವರ ಈ ಕೆಳಕಂಡಂತಿರುತ್ತದೆ ಎಂದು ಮುಖ್ಯ ಆಯುಕ್ತರು, ಬಿಬಿಎಂಪಿ ರವರು ತಿಳಿಸಿರುತ್ತಾರೆ.

. . .3/-

ಕ್ರ ಸ ಂ.	ತಾಂತ್ರಿಕ ಮೌಲ್ಯ ಮಾಪನದಲ್ಲಿ ಅರ್ಹರಾದ ಗುತ್ತಿಗೆದಾರರು	ಅಂದಾಜು ಮೊತ್ತ (ರೂ. ಲಕ್ಷಗಳಲ್ಲಿ)	2018-19ನೇ ಸಾಲಿನ ದರಗಳ ಪಟ್ಟಿಯಂತೆ ಟೆಂಡರ್ ಗಿಟ್ಟ ಮೊತ್ತ (ರೂಗಳಲ್ಲಿ)	ಟೆಂಡರ್‌ನಲ್ಲಿ ನಮೂದಿಸಿರುವ ಮೊತ್ತ (ರೂಗಳಲ್ಲಿ)	ಟೆಂಡರ್ ಗಿಟ್ಟ ಮೊತ್ತ ದರಗಳಿಗೆ ಶೇಕಡವಾರು	ದರ ಸಂಧಾನದ ನಂತರ ಗುತ್ತಿಗೆದಾರರು ಒಪ್ಪಿರುವ ಮೊತ	ದರ ಸಂಧಾನದ ನಂತರ ಶೇಕಡವಾರು
1	Sri.Nagasandra Shamanna Ramarao (Rajalakshmi Rock Drillers)	420.00	3,80,17,365.07	5.29%	3,79,05,841.13	4.99% ಹೆಚ್ಚು	ಎಲ್-1

ಕಾಮಗಾರಿಯ ಟೆಂಡರ್‌ನ ಎಲ್-1 ಗುತ್ತಿಗೆದಾರರಾದ Sri Nagasandra Shamanna Ramarao (Rajalakshmi Rock Drillers) ರವರು ಮಂಜೂರಾತಿ ದರಗಳ ಮೇಲೆ ಶೇ.5.29% ಹೆಚ್ಚುವರಿಯಾಗಿದ್ದು, ಮುಖ್ಯ ಅಭಿಯಂತರರು ಯಲಹಂಕ ವಲಯ ರವರು ಗುತ್ತಿಗೆದಾರರೊಂದಿಗೆ ದರ ಸಂಧಾನ ನಡೆಸಿ, ದರ ಸಂಧಾನದ ನಂತರ ರೂ.3,79,05,841.13 ಗಳಾಗಿದ್ದು, ಮಂಜೂರಾತಿ ದರಗಳ ಮೇಲೆ (2018-19ನೇ ಸಾಲಿನ) ಶೇ.4.99% ರಷ್ಟು ಹೆಚ್ಚುವರಿಯಾಗಿರುತ್ತದೆ. ದಿನಾಂಕ: 19-03-2022 ರಂದು ನಡೆದ ಆರ್ಥಿಕ ಮೌಲ್ಯಮಾಪನ ಸಮಿತಿ ಸಭೆಯಲ್ಲಿ ಶೇ.4.99%ರಷ್ಟು ಹೆಚ್ಚುವರಿ ಟೆಂಡರ್‌ಗೆ ಮಂಜೂರಾತಿ ನೀಡಲು ಸಮಿತಿಯಲ್ಲಿ ಶಿಫಾರಸ್ಸು ಮಾಡಲಾಗಿರುತ್ತದೆ.

ಮೇಲಿನ ಅಂಶಗಳ ಹಿನ್ನೆಲೆಯಲ್ಲಿ ಕಾಮಗಾರಿಯ ಅಂದಾಜು ಮೊತ್ತ ರೂ.420.00 ಲಕ್ಷಗಳಿಗೆ ಆಡಳಿತಾತ್ಮಕ ಅನುಮೋದನೆ ಮತ್ತು ಕಡಿಮೆ ಮೊತ್ತದ ಟೆಂಡರ್‌ದಾರರಾದ Sri Nagasandra Shamanna Ramarao (Rajalakshmi Rock Drillers) ರವರ ಸಂಧಾನಿತ ಟೆಂಡರ್‌ನ ಮೊತ್ತ ರೂ.3,79,05,841.13 ಶೇ.4.99% ರಷ್ಟು ಹೆಚ್ಚುವರಿ ದರಗಳಿಗೆ ಮಂಜೂರಾತಿಯನ್ನು ನೀಡುವಂತೆ ಮುಖ್ಯ ಆಯುಕ್ತರು, ಬಿಬಿಎಂಪಿ ರವರು ಕೋರಿರುತ್ತಾರೆ.

ಮೇಲೆ ಕ್ರಮ ಸಂಖ್ಯೆ (3) ರಲ್ಲಿ ಓದಲಾದ ದಿನಾಂಕ: 29-04-2022ರ ಪತ್ರದಲ್ಲಿ, ರೂ.10.00 ಕೋಟಿಗಳಿಗಿಂತ ಕಡಿಮೆ ಇರುವ ಟೆಂಡರ್ ಆಹ್ವಾನಿಸಿರುವ ಬಗ್ಗೆ ತಮ್ಮ ಸ್ಪಷ್ಟ ಅಭಿಪ್ರಾಯ / ಸಮರ್ಥನೆಗಳನ್ನೊಳಗೊಂಡ ವರದಿಯನ್ನು ಸರ್ಕಾರಕ್ಕೆ ಸಲ್ಲಿಸುವಂತೆ ಬಿಬಿಎಂಪಿ ಮುಖ್ಯ ಆಯುಕ್ತರನ್ನು ಕೋರಲಾಗಿತ್ತು.

ಮೇಲೆ ಕ್ರಮ ಸಂಖ್ಯೆ (4) ರಲ್ಲಿ ಓದಲಾದ ದಿನಾಂಕ: 30-06-2022ರ ಪತ್ರದಲ್ಲಿ, ಮುಖ್ಯ ಆಯುಕ್ತರು, ಬಿಬಿಎಂಪಿ ರವರು ಸರ್ಕಾರದ ದಿನಾಂಕ: 29-04-2022ರ ಪತ್ರದಲ್ಲಿ, ಬಿಬಿಎಂಪಿ ವ್ಯಾಪ್ತಿಯಲ್ಲಿ 15ನೇ ಹಣಕಾಸು ಆಯೋಗ ಅನುದಾನದಡಿ 2020-21ನೇ ಸಾಲಿಗೆ ನಿರು ಸರಬರಾಜು ಮತ್ತು ಘನತ್ಯಾಜ್ಯ ನಿರ್ವಹಣೆ ಸುಧಾರಣೆಗಾಗಿ ನಿಗಧಿಯಾಗಿರುವ ಅನುದಾನದಲ್ಲಿ ಸರ್ಕಾರದ ಆದೇಶ ಸಂಖ್ಯೆ: ನಅಇ 307 ಸಿಎಸ್‌ಎಸ್ 2020, ದಿನಾಂಕ: 27-07-2021ರಲ್ಲಿ ಬ್ಯಾಟರಾಯನಪುರ ವಿಧಾನಸಭಾ ಕ್ಷೇತ್ರಕ್ಕೆ 6 ಪ್ರತ್ಯೇಕ ಕಾಮಗಾರಿಗಳಿಗೆ ರೂ.70.00 ಲಕ್ಷದಂತೆ ಒಟ್ಟು ಮೊತ್ತ ರೂ.4.20 ಕೋಟಿಗಳು ಮಾತ್ರ ಮಂಜೂರಾಗಿರುತ್ತದೆ. ಆದುದರಿಂದ ಸದರಿ 6 ಕಾಮಗಾರಿಗಳನ್ನು ಒಟ್ಟುಗೂಡಿಸಿ ರೂ.4.20 ಕೊಟಿಗಳ ಪ್ಯಾಕೇಜ್ ಮಾಡಿ ಟೆಂಡರ್ ಆಹ್ವಾನಿಸಲಾಗಿರುತ್ತದೆ.

ಆದುದರಿಂದ, ಬ್ಯಾಟರಾಯನಪುರ ವಿಧಾನಸಭಾ ಕ್ಷೇತ್ರಕ್ಕೆ ಮಂಜೂರಾಗಿರುವ ಪೂರ್ಣ ಅನುದಾನಕ್ಕೆ ಸಂಬಂಧಿಸಿದಂತೆ ಮಾಡಲಾಗಿರುವ "Augmentation of Water Supply through borewell network of

. . .4/-

pipelines and ground water recharge facilities in Ward No: 05 and 06 (Package No:03) (Package Consists of 6 Works)" ಕಾಮಗಾರಿಯ ಅಂದಾಜು ಮೊತ್ತ ರೂ.4.20 ಕೋಟಿಗಳಿಗೆ ಆಡಳಿತಾತ್ಮಕ ಅನುಮೋದನೆ ಮತ್ತು ಟೆಂಡರ್‌ಗೆ ಅನುಮೋದನೆ ನೀಡುವಂತೆ ಬಿಬಿಎಂಪಿ ಮುಖ್ಯ ಆಯುಕ್ತರು ಕೋರಿರುತ್ತಾರೆ.

ಈ ಹಿನ್ನೆಲೆಯಲ್ಲಿ, ಮೇಲೆ ಕ್ರಮ ಸಂಖ್ಯೆ (5) ರಲ್ಲಿ ಓದಲಾದ ದಿನಾಂಕ: 06-08-2022 ರಂದು ನಡೆದ ಅಧಿಕಾರಯುಕ್ತ ಸಮಿತಿ ಸಭೆಯ ಮುಂದೆ ಬಿ.ಬಿ.ಎಂ.ಪಿ. ಮುಖ್ಯ ಆಯುಕ್ತರ ದಿನಾಂಕ: 29-03-2022 / 08-04-2022 ಮತ್ತು 30-06-2022ರ ಪ್ರಸ್ತಾವನೆಯನ್ನು ಮಂಡಿಸಲಾಗಿದ್ದು, ಅಧಿಕಾರಯುಕ್ತ ಸಮಿತಿ ಸಭೆಯಲ್ಲಿ, ವಿಷಯವನ್ನು ಚರ್ಚಿಸಿ ಈ ಕೆಳಕಂಡಂತೆ ನಿರ್ಣಯಿಸಲಾಗಿದೆ.

> "ವಿವರವಾದ ಚರ್ಚೆಯ ನಂತರ Augmentation of Water supply through bore-well network of pipelines and ground water recharge facilities in ward No. 05 and 06 (Package No. 03) (Package consists of 6 works) ಪ್ಯಾಕೇಜಿನ ಅಂದಾಜು ಮೊತ್ತಕ್ಕೆ ಆಡಳಿತಾತ್ಮಕ ಅನುಮೋದನೆ ನೀಡಿ, Nagasandra Shamanna Ramarao (Rajalakshmi Rock Drillers) ರವರ ಬಿಡ್ಡನ್ನು ಟೆಂಡರ್‌ಗಿಟ್ಟ ಮೊತ್ತವಾದ ರೂ.3,61,04,239.58 ಗಳಿಗೆ ಹೋಲಿಸಿದಾಗ, +4.99% ರಷ್ಟು ಹೆಚ್ಚು ಇರುವ ಅಂದರೆ, ರೂ.3,79,05,841.13 ಗಳ ಮೊತ್ತಕ್ಕೆ ಅನುಮೋದಿಸಲು ಮತ್ತು ರೂ.10 ಕೋಟಿಗಿಂತ ಕಡಿಮೆ ಇರುವ ಮೊತ್ತದ ಪ್ಯಾಕೇಜ್ ರೂಪಿಸಿ ಟೆಂಡರ್ ಕರೆದಿರುವ ಕ್ರಮವನ್ನು ಸಂಬಂಧಪಟ್ಟ ಮುಖ್ಯ ಆಯುಕ್ತರ ಲಿಖಿತ ವಿವರಣೆಯನ್ನು ಪರಿಗಣಿಸಿ ಸ್ಥಿರೀಕರಣಕ್ಕಾಗಿ, ಮಾನ್ಯ ಮುಖ್ಯಮಂತ್ರಿಗಳ ಅನುಮೋದನೆಗೆ ಸಲ್ಲಿಸಲು ಸರ್ವಾನುಮತದಿಂದ ತೀರ್ಮಾನಿಸಲಾಯಿತು."

ದಿನಾಂಕ: 06-08-2022 ರಂದು ನಡೆದ ಅಧಿಕಾರಯುಕ್ತ ಸಮಿತಿ ಸಭೆಯ ನಿರ್ಣಯದಂತೆ ಈ ಆದೇಶ.

ಸರ್ಕಾರದ ಆದೇಶ ಸಂಖ್ಯೆ: ನಅಇ 213 ಎಂಎನ್‌ವೈ 2022 (ಇ),
ಬೆಂಗಳೂರು, ದಿನಾಂಕ: 08-09-2022.

ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ, ಸರ್ಕಾರದ ಆದೇಶ ಸಂಖ್ಯೆ: ನಅಇ 307 ಸಿಎಸ್‌ಎಸ್ 2020, ದಿನಾಂಕ: 27-07-2021 ರಲ್ಲಿ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ 15ನೇ ಹಣಕಾಸು ಆಯೋಗದಡಿಯಲ್ಲಿ 2020-21ನೇ ಸಾಲಿಗೆ ನೀರು ಸರಬರಾಜು ಹಾಗೂ ಘನತ್ಯಾಜ್ಯ ನಿರ್ವಹಣೆ ಸುಧಾರಣೆಗಾಗಿ ನಿಗಧಿಯಾಗಿರುವ ಒಟ್ಟು ರೂ.27900-00 ಲಕ್ಷಗಳ ಪೈಕಿ, ರೂ.18030-00 ಲಕ್ಷಗಳ ಅನುದಾನದ ಮೊತ್ತಕ್ಕೆ ಅನುಬಂಧ-1, 2 ಮತ್ತು 3 ರಲ್ಲಿ ಪಟ್ಟಿ ಮಾಡಿರುವ ಒಟ್ಟು 147 ಸಂಖ್ಯೆಯ ಕಾಮಗಾರಿಗಳನ್ನೊಳಗೊಂಡ ಸೂಕ್ಷ್ಮ ಮಟ್ಟದ ಕ್ರಿಯಾಯೋಜನೆಗೆ (Micro Plan) ಸರ್ಕಾರದ ಅನುಮೋದನೆ ನೀಡಿ ಆದೇಶಿಸಲಾಗಿರುತ್ತದೆ. ಸದರಿ ಆದೇಶದ ಅನುಬಂಧ-2(ಡಿ) ರ ಕ್ರಮ ಸಂಖ್ಯೆ: 7, 8, 9, 10, 11 ಮತ್ತು 12 ರ ಒಟ್ಟು 6 ಕಾಮಗಾರಿಗಳಿಗೆ ರೂ.4.20 ಕೋಟಿಗಳ ಅನುದಾನ ನಿಗಧಿಪಡಿಸಿದ್ದು, ಸದರಿ ಕಾಮಗಾರಿಗಳನ್ನು ಒಗ್ಗೂಡಿಸಿ ಮಾಡಲಾಗಿರುವ "Augmentation of Water supply through bore-well network of pipelines and ground water recharge facilities in ward No. 05 and 06 (Package No. 03) (Package consists of 6 works)" ಪ್ಯಾಕೇಜಿನ ರೂ.4.20 ಕೋಟಿಗಳ ಅಂದಾಜು ಮೊತ್ತಕ್ಕೆ ಆಡಳಿತಾತ್ಮಕ ಅನುಮೋದನೆ ನೀಡಿ, ದಿನಾಂಕ:

. . .5/-

06-08-2022 ರಂದು ನಡೆದ ಅಧಿಕಾರಯುಕ್ತ ಸಮಿತಿ ಸಭೆಯ ನಿರ್ಣಯದಂತೆ, Nagasandra Shamanna Ramarao (Rajalakshmi Rock Drillers) ರವರ ಬಿಡ್ಡನ್ನು ಟೆಂಡರ್‌ಗಿಟ್ಟ ಮೊತ್ತವಾದ ರೂ.3,61,04,239.58 ಗಳಿಗೆ ಹೋಲಿಸಿದಾಗ, +4.99% ರಷ್ಟು ಹೆಚ್ಚು ಇರುವ ಅಂದರೆ, ರೂ.3,79,05,841.13 (ಮೂರು ಕೋಟಿ ಎಪ್ಪತ್ತೊಂಭತ್ತು ಲಕ್ಷದ ಐದು ಸಾವಿರದ ಎಂಟು ನೂರ ನಲವತ್ತೊಂದು ರೂಪಾಯಿಗಳು ಹಾಗೂ ಹದಿಮೂರು ಪೈಸೆಗಳು ಮಾತ್ರ) ಗಳಿಗೆ ಮಿತಿಗೊಳಿಸಿ ಟೆಂಡರ್‌ಗೆ ಈ ಕೆಳಕಂಡ ಷರತ್ತುಗಳಿಗೆ ಒಳಪಟ್ಟು ಅನುಮೋದನೆಯನ್ನು ನೀಡಿದೆ.

ಷರತ್ತುಗಳು:

1. ಕಾಮಗಾರಿಗಳಿಗೆ ಅನುಮೋದನೆ ನೀಡಿರುವ ಟೆಂಡರ್ ಮೊತ್ತಕ್ಕೆ ಬಿಡ್‌ದಾರರು ಒಪ್ಪದ ಪಕ್ಷದಲ್ಲಿ ಮರು ಟೆಂಡರ್ ಕರೆಯುವುದು.

2. ಮೇಲಿನ ಕಾಮಗಾರಿಗಳನ್ನು ಕೆ.ಟಿ.ಪಿ.ಪಿ. ಕಾಯ್ದೆ / ನಿಯಮಗಳು ಹಾಗೂ ಎಲ್ಲಾ ಚಾಲ್ತಿ ನಿಯಮಗಳನ್ನು ಕಡ್ಡಾಯವಾಗಿ ಪಾಲಿಸಿರುವುದನ್ನು ಬಿಬಿಎಂಪಿ ಮುಖ್ಯ ಆಯುಕ್ತರು ಖಚಿತಪಡಿಸಿಕೊಂಡು ಅನುಷ್ಠಾನಗೊಳಿಸುವುದು.

3. ಈ ಕಾಮಗಾರಿಗೆ ತಗಲುವ ವೆಚ್ಚವನ್ನು ಸರ್ಕಾರದ ಆದೇಶ ಸಂಖ್ಯೆ: ನಅಇ 307 ಸಿಎಸ್‌ಎಸ್ 2020, ದಿನಾಂಕ: 27-07-2021ರಲ್ಲಿ ಮೀಸಲಿಟ್ಟಿರುವ ಅನುದಾನದಲ್ಲಿ ಭರಿಸುವುದು.

4. ಮೇಲಿನ ಕಾಮಗಾರಿಯನ್ನು ಸರ್ಕಾರದಿಂದ ಮಂಜೂರಾದ ಮೊತ್ತದ ಮಿತಿಯಲ್ಲಿಯೇ ಯಾವುದೇ ಹೆಚ್ಚುವರಿಯಾಗದಂತೆ ಅನುಷ್ಠಾನಗೊಳಿಸಲು ಕ್ರಮ ವಹಿಸತಕ್ಕದ್ದು ಹಾಗೂ ಹೆಚ್ಚುವರಿ ಟೆಂಡರ್ ಪ್ರೀಮಿಯಂ ಅನ್ನು ಬಿಬಿಎಂಪಿಯ ಸ್ವಂತ ಸಂಪನ್ಮೂಲದಿಂದ ಭರಿಸತಕ್ಕದ್ದು.

5. ಕರ್ನಾಟಕ ಆರ್ಥಿಕ ಸಂಹಿತೆ 1958 ಸಾಧಿಲ್ವಾರು ವೆಚ್ಚ ಕೈಪಿಡಿ ಅಧಿನಿಯಮ ಹಾಗೂ ಕಾಲಕಾಲಕ್ಕೆ ಚಾಲ್ತಿಯಲ್ಲಿರುವ ಎಲ್ಲಾ ಕಾಯ್ದೆ ನಿಯಮಗಳನುಸಾರ ಕ್ರಮವಹಿಸತಕ್ಕದ್ದು.

6. ಸರ್ಕಾರವು ಕಾಮಗಾರಿಗಳಿಗೆ ಆಡಳಿತಾತ್ಮಕ ಮತ್ತು ಟೆಂಡರ್‌ಗಳಿಗೆ ಅನುಮೋದನೆ ನೀಡಿದ್ದಾಗ್ಯೂ ಸಹ ಕಾಮಗಾರಿಯು ಪುನರಾವರ್ತನೆ ಆಗದಂತೆ ನೋಡಿಕೊಳ್ಳತಕ್ಕದ್ದು. ಅನುಮೋದನೆಗೊಂಡಿರುವ ಕಾಮಗಾರಿಯನ್ನಲ್ಲದೆ ಯಾವುದೇ ಕಾರಣಕ್ಕೆ ಬೇರೆ ಕಾಮಗಾರಿಗಳನ್ನು ಕೈಗೊಳ್ಳಬಾರದು.

7. ಮೇಲಿನ ಕಾಮಗಾರಿಗೆ 3rd Party Quality Monitors ಗಳನ್ನು ನೇಮಿಸಿಕೊಂಡು ಉತ್ತಮ ಗುಣಮಟ್ಟದಿಂದ ಕಾಮಗಾರಿಯನ್ನು ಅನುಷ್ಠಾನಗೊಳಿಸಲು ಕ್ರಮ ವಹಿಸತಕ್ಕದ್ದು.

8. ಸದರಿ ಬಿಡ್ದುದಾರರು ಅಥವಾ ಇನ್ಯಾವುದೇ ಹಂತದಲ್ಲಿ ತಪ್ಪು ಮಾಹಿತಿ / ದಾಖಲೆ ನೀಡಿರುವುದು ಕಂಡುಬಂದಲ್ಲಿ ಟೆಂಡರ್‌ಅನ್ನು ರದ್ದುಪಡಿಸಲು ಬಿಬಿಎಂಪಿ ಮುಖ್ಯ ಆಯುಕ್ತರು ನಿಯಮಾನುಸಾರ ಕ್ರಮ ವಹಿಸುವುದು.

9. ದಿನಾಂಕ: 28-04-2022ರ ಅಧಿಕಾರಯುಕ್ತ ಸಮಿತಿ ಸಭೆಯ ನಡವಳಿಯಲ್ಲಿ ನಮೂದಿಸಿರುವ ಎಲ್ಲಾ ಷರತ್ತು ಹಾಗೂ ನಿಬಂಧನೆಗಳನ್ನು ತಪ್ಪದೆ ಪಾಲಿಸತಕ್ಕದ್ದು.

.6/-

10. ರೂ.10.00 ಕೋಟಿಗಿಂತ ಕಡಿಮೆ ಪ್ಯಾಕೇಜ್‌ಗಳಲ್ಲಿನ ಕಾಮಗಾರಿಗಳಿಗೆ ಸಂಬಂಧಿಸಿದಂತೆ ಸೂಕ್ತ ಸಮರ್ಥನೆ ಮತ್ತು ಸ್ಪಷ್ಟೀಕರಣಗಳನ್ನು ಪಡೆಯತಕ್ಕದ್ದು. ಇನ್ನು ಮುಂದೆ ಸೂಕ್ತ ಸಮರ್ಥನೆ ಇಲ್ಲದೆ ರೂ.10.00 ಕೋಟಿಗಿಂತ ಕಡಿಮೆ ಪ್ಯಾಕೇಜ್‌ಗಳಲ್ಲಿ ಕಾಮಗಾರಿಗಳನ್ನು ಪ್ರಸ್ತಾಪಿಸದಂತೆ ಸೂಚಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಲಕ್ಷ್ಮೀ ಸಾಗರ್ ಎನ್.ಕೆ.)
ಸರ್ಕಾರದ ಅಧೀನ ಕಾರ್ಯದರ್ಶಿ,
ನಗರಾಭಿವೃದ್ಧಿ ಇಲಾಖೆ (ಬಿ.ಬಿ.ಎಂ.ಪಿ.)

ಇವರಿಗೆ:

1. ಮಹಾಲೇಖಪಾಲರು, ಲೆಕ್ಕ ತಪಾಸಣೆ / ಲೆಕ್ಕಪತ್ರ, ಕರ್ನಾಟಕ ಬೆಂಗಳೂರು.
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
3. ಮಾನ್ಯ ಮುಖ್ಯಮಂತ್ರಿಯವರ ಅಪರ ಮುಖ್ಯ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
4. ಮುಖ್ಯ ಆಯುಕ್ತರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಬೆಂಗಳೂರು.
5. ವಿಶೇಷ ಆಯುಕ್ತರು (ಯೋಜನೆ), ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಬೆಂಗಳೂರು.
6. ಪ್ರಧಾನ ಅಭಿಯಂತರರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಬೆಂಗಳೂರು.
7. ಮುಖ್ಯ ಲೆಕ್ಕಾಧಿಕಾರಿಗಳು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಬೆಂಗಳೂರು.
8. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ 3 ಮತ್ತು 9), ವಿಧಾನಸೌಧ, ಬೆಂಗಳೂರು.
9. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿಗಳು, ನಗರಾಭಿವೃದ್ಧಿ ಇಲಾಖೆ.
10. ಸರ್ಕಾರದ ಉಪ ಕಾರ್ಯದರ್ಶಿ–3 ರವರ ಆಪ್ತ ಸಹಾಯಕರು, ನಗರಾಭಿವೃದ್ಧಿ ಇಲಾಖೆ.
11. ಕಾರ್ಯಪಾಲಕ ಅಭಿಯಂತರರು (ತಾಂತ್ರಿಕ ಕೋಶ), ನಗರಾಭಿವೃದ್ಧಿ ಇಲಾಖೆ.
12. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.